ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	**194**
ವಿಧಾನ ಪರಿಷತ್ತಿನ ಸದಸ್ಯರ ಹೆಸರು	:	ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ	:	22.09.2020
ಉತ್ತರಿಸುವ ಸಚಿವರು	:	ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು.

ಕ್ರ. ಸಂ	ಪ್ರಶ್ನೆ	ಉತ್ತರ
ಅ	ಕೇಂದ್ರ ಸರ್ಕಾರದ ಒಂದು ರಾಷ್ಟ್ರ ಒಂದು ಪಡಿತರ ಚೀಟಿ ಯೋಜನೆ ರಾಜ್ಯದಲ್ಲಿ ಯಾವಾಗ ಜಾರಿಗೆ ಬರಲಿದೆ; ಇದರಿಂದ ಆಗುವ ಪ್ರಯೋಜನ ಏನು;	ಕೇಂದ್ರ ಸರ್ಕಾರದ ಒಂದು ರಾಷ್ಟ್ರ ಒಂದು ಪಡಿತರ ಚೀಟಿ ಯೋಜನೆಯು ಜನವರಿ 2020 ರಿಂದ ರಾಜ್ಯದಲ್ಲಿ ಜಾರಿಗೊಳಿಸಲಾಗಿದೆ. ಇದರಿಂದ ದೇಶದ 26 ರಾಜ್ಯಗಳ ಫಲಾನುಭವಿಗಳು ಯಾವುದೇ ರಾಜ್ಯದಲ್ಲಾದರೂ ಪಡಿತರ ಪಡೆಯಲು ಅವಕಾಶವಿರುತ್ತದೆ.
ಆ	ರಾಜ್ಯದಲ್ಲಿ ಆಹಾರ ಮತ್ತು ನಾಗರೀಕ ಪೂರೈಕೆ ಇಲಾಖೆಯಿಂದ ಪಡಿತರ ಪಡೆಯುವ ಫಲಾನುಭವಿಗಳಿಗೆ ಇ-ಕೆವೈಸಿ ವ್ಯವಸ್ಥೆಯು ಇನ್ನೂ ಜಾರಿಯಲ್ಲಿದೆಯೇ; ಹಾಗಿದ್ದಲ್ಲಿ, ಎಷ್ಟು ಫಲಾನುಭವಿಗಳು ಇ-ಕೆವೈಸಿ ಪ್ರಯೋಜನೆ ಪಡೆದಿರುತ್ತಾರೆ?	ರಾಜ್ಯದಲ್ಲಿ 80,43,805 ಪಡಿತರ ಕಾರ್ಡ್‌ಗಳ ಫಲಾನುಭವಿಗಳು ಇ-ಕೆವೈಸಿ ವ್ಯವಸ್ಥೆಯ ಪ್ರಯೋಜನ ಪಡೆದಿರುತ್ತಾರೆ. ಪ್ರಸ್ತುತ ಕೋವಿಡ್-19ರ ಹಿನ್ನೆಲೆಯಲ್ಲಿ ಪಡಿತರ ಪಡೆಯಲು ಇ-ಕೆವೈಸಿ ವ್ಯವಸ್ಥೆಯನ್ನು ಸ್ಥಗಿತಗೊಳಿಸಲಾಗಿದೆ.
ಇ	ಬೀದರ್ ಜಿಲ್ಲೆಯಲ್ಲಿ ಇದುವರೆಗೂ ವಿತರಿಸಲಾದ ಬಿ.ಪಿ.ಎಲ್ ಹಾಗೂ ಎ.ಪಿ.ಎಲ್ ಕಾರ್ಡ್ ಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)	ಬೀದರ್ ಜಿಲ್ಲೆಯಲ್ಲಿ ಇದುವರೆಗೂ ವಿತರಿಸಲಾದ ಬಿ.ಪಿ.ಎಲ್ ಹಾಗೂ ಎ.ಪಿ.ಎಲ್ ಕಾರ್ಡ್‌ಗಳ ವಿವರ ಕೆಳಕಂಡಂತಿದೆ:

ತಾಲೂಕು	ಬಿ.ಪಿ.ಎಲ್	ಎ.ಪಿ.ಎಲ್	ಒಟ್ಟು
ಔರಾದ	56679	6727	63406
ಬಸವಕಲ್ಯಾಣ	71924	4326	76250
ಭಾಲ್ಕಿ	61450	8719	70169
ಬೀದರ	90391	15933	106324
ಹುಮನಾಬಾದ	69854	5979	75833
ಒಟ್ಟು	350298	41684	391982

ಈ	2019-20ನೇ ಸಾಲಿನಲ್ಲಿ ಪತ್ತೆ ಹಚ್ಚಲಾದ ನಕಲಿ ಪಡಿತರ ಚೀಟಿಗಳ ಸಂಖ್ಯೆ ಎಷ್ಟು; ಈ ಪ್ರಕರಣಗಳಲ್ಲಿ ಎಷ್ಟು ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಲಾಗಿದೆ?	2018 ರಿಂದ ಇದುವರೆಗೆ ರಾಜ್ಯದಲ್ಲಿ 9301 ಅಂತ್ಯೋದಯ ಪಡಿತರ ಚೀಟಿಗಳನ್ನು ಹಾಗೂ 218889 ಆದ್ಯತಾ ಪಡಿತರ ಚೀಟಿಗಳನ್ನು (ಬಿ.ಪಿ.ಎಲ್) ರದ್ದುಪಡಿಸಲಾಗಿದೆ. ಆದ್ಯತಾ (ಬಿಪಿಎಲ್) ಮತ್ತು ಅಂತ್ಯೋದಯ ಪಡಿತರ ಚೀಟಿಯನ್ನು ಸರ್ಕಾರ ನಿಗದಿಪಡಿಸಿದ ಮಾನದಂಡಗಳ ವಿರುದ್ಧವಾಗಿ ಪಡೆದ ಅನರ್ಹ ಪಡಿತರ ಚೀಟಿ ರದ್ದುಪಡಿಸಿ, ಅವರು ಪಡೆದಿದ್ದ ಆಹಾರ ಪದಾರ್ಥಗಳ ಮೌಲ್ಯವನ್ನು ವಸೂಲಿ ಮಾಡಲಾಗಿದೆ.

ಆನಾಸ 242 ಡಿಆರ್ ಎ 2020 (ಇ-ಆಫೀಸ್)

(ಕೆ.ಗೋಪಾಲಯ್ಯ)

ಆಹಾರ, ನಾಗರಿಕ ಸರಬರಾಜು ಮತ್ತು

ಗ್ರಾಹಕರ ವ್ಯವಹಾರಗಳ ಹಾಗೂ

ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು.